## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** COVID-19 ಸಾಂಕ್ರಾಮಿಕ ರೋಗವನ್ನು ತಡೆಗಟ್ಟಲು ಸೋಂಕಿತರನ್ನು ಕ್ವಾರಂಟೈನ್ ಕ್ಯಾಂಪ್‌ಗಳಲ್ಲಿ ಇರಿಸಲು ಹೋಟೆಲ್ ದರ ನಿಗದಿಪಡಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಕಂಇ 20 ಪ್ರಕಾ 2020, ದಿನಾಂಕ:14.04.2020.
2. ಆಯುಕ್ತರು, ಬಿಬಿಎಂಪಿ, ಇವರ ಪತ್ರ ಸಂಖ್ಯೆ.ಆ.ಆ.ಕಾ/ಪಿಎಸ್ಆರ್(04) 42/20-21 ದಿನಾಂಕ:18.04.2020.

*****

**ಪ್ರಸ್ತಾವನೆ:**

ಕೇಂದ್ರೀಯ ಗೃಹ ಮಂತ್ರಾಲಯವು ಹೊರಡಿಸಿರುವ ಪ್ರಮಾಣಿತ ಕಾರ್ಯಾಚರಣೆ ವಿಧಾನ (Standard Operating Procedure) ರಲ್ಲಿ ಕೋವಿಡ್-19 ಸೋಂಕಿತ ವ್ಯಕ್ತಿಯನ್ನು ಕ್ವಾರಂಟೈನ್‌ಯಲ್ಲಿಟ್ಟು, ಚಿಕಿತ್ಸೆ ನೀಡಲು ಮತ್ತು ಸೋಂಕು ಹರಡದಂತೆ ಕ್ರಮ ಕೈಗೊಳ್ಳಬೇಕಾಗಿರುತ್ತದೆ. ಕೇಂದ್ರೀಯ ಗೃಹ ಮಂತ್ರಾಲಯದ ಮಾರ್ಗಸೂಚಿಯಂತೆ ಸೋಂಕಿತರನ್ನು ಕ್ವಾರಂಟೈನ್ ಕ್ಯಾಂಪ್‌ಗಳಲ್ಲಿರಿಸಿ ಅದರ ವೆಚ್ಚವನ್ನು SDRF ಅಡಿ ಭರಿಸಲು ಅವಕಾಶ ಕಲ್ಪಿಸಿದೆ. ಅದರಂತೆ, ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಸೋಂಕಿತರನ್ನು ಕ್ವಾರಂಟೈನ್‌ನಲ್ಲಿ ಇರಿಸಲು ಸಾಮಾನ್ಯ ದರ್ಜೆಯ ಹೋಟೆಲ್‌ಗಳಲ್ಲಿ ಕ್ವಾರಂಟೈನ್ ಕ್ಯಾಂಪ್‌ಗಳನ್ನು ಕೊನೆಯ ಅವಕಾಶವನ್ನಾಗಿ ತೆರೆಯಲು ಈ ಕೆಳಕಂಡಂತೆ ಹೋಟೆಲ್ ಬಾಡಿಗೆ ದರ ನಿಗದಿ ಪಡಿಸಲಾಗಿತ್ತು:

| ಸ್ಥಳ | ಗರಿಷ್ಠ ಕೊಠಡಿ ಬಾಡಿಗೆ (ಪ್ರತಿ ದಿನಕ್ಕೆ ಊಟ ಸೇರಿದಂತೆ) |
|---|---|
| ಬಿ.ಬಿ.ಎಂ.ಪಿ ವ್ಯಾಪ್ತಿ | ರೂ.900/- |
| ಇತರೆ ಮುನ್ಸಿಪಾಲ್ ಕಾರ್ಪೊರೇಷನ್ ವ್ಯಾಪ್ತಿ | ರೂ.750/- |
| ಪುರಸಭೆ ವ್ಯಾಪ್ತಿಯನ್ನು ಒಳಗೊಂಡಂತೆ ರಾಜ್ಯದ ಇತರ ಎಲ್ಲಾ ಪ್ರದೇಶಗಳು | ರೂ.600/- |

ಸರ್ಕಾರಿ ಆದೇಶದಲ್ಲಿ ನಿಗದಿಪಡಿಸಿರುವ ದರದಂತೆ ಹೋಟೆಲ್‌ನ ಸ್ವಚ್ಛತೆ, ನಿರ್ವಹಣೆ ಮತ್ತು ಊಟದ ವ್ಯವಸ್ಥೆ ಮಾಡಲು ಕಷ್ಟ ಸಾಧ್ಯವಾಗುತ್ತದೆ ಎಂದು ಹೋಟೆಲ್ ಮಾಲೀಕರು ಹಾಗೂ ನಿರ್ವಹಣಾಧಿಕಾರಿಗಳು ತಿಳಿಸಿರುವುದರಿಂದ ದರಗಳನ್ನು ಪರಿಷ್ಕರಿಸುವಂತೆ ಮೇಲೆ ಓದಲಾದ (2)ರ ಪತ್ರದಲ್ಲಿ ಆಯುಕ್ತರು, ಬಿ.ಬಿ.ಎಂ.ಪಿ ಇವರು ಕೋರಿರುತ್ತಾರೆ. ಈ ಕೋರಿಕೆಯನ್ನು ಪರಿಶೀಲಿಸಲು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿ.ನಿ) ಇವರ ಅಧ್ಯಕ್ಷತೆಯಲ್ಲಿ, ಬಿಬಿಎಂಪಿ ಅಧಿಕಾರಿಗಳು, ಬೆಂಗಳೂರು ಹೋಟೆಲ್‌ಗಳ ಸಂಘದ ಪದಾಧಿಕಾರಿಗಳು ಹಾಗೂ ಇತರೆ ಅಧಿಕಾರಿಗಳೊಂದಿಗೆ ದಿನಾಂಕ:23.04.2020ರಂದು ನಡೆದ ಸಭೆಯಲ್ಲಿ ಚರ್ಚಿಸಿ ನಿರ್ಣಯಿಸಿದಂತೆ, ಕ್ವಾರಂಟೈನ್ ಕ್ಯಾಂಪ್ಸ್ ಗಳನ್ನು ತೆರೆಯಲು ಹೋಟೆಲ್ ಬಾಡಿಗೆ ದರವನ್ನು ಪರಿಷ್ಕರಿಸಲು ಸರ್ಕಾರವು ನಿರ್ಧರಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಂಇ 20 ಪ್ರಕಾ 2020; ಬೆಂಗಳೂರು, ದಿನಾಂಕ:06.05.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಪ್ರಸ್ತುತ ಕೋವಿಡ್-19 ಸಾಂಕ್ರಾಮಿಕ ರೋಗವನ್ನು ನಿಯಂತ್ರಿಸುವ ಸಲುವಾಗಿ ಸೋಂಕಿತರನ್ನು ಕ್ವಾರಂಟೈನ್‌ನಲ್ಲಿ ಇರಿಸಲು ಸಾಮಾನ್ಯ ದರ್ಜೆಯ ಹೋಟೆಲ್‌ಗಳಲ್ಲಿ ಕೊನೆಯ ಅವಕಾಶವಾಗಿ ಕ್ವಾರಂಟೈನ್ ಕ್ಯಾಂಪ್ಸ್‌ಗಳನ್ನು ತೆರೆಯಲು ಈ ಕೆಳಕಂಡಂತೆ ಹೋಟೆಲ್ ಬಾಡಿಗೆ ದರ ಪರಿಷ್ಕರಿಸಿ ನಿಗದಿ ಪಡಿಸಲಾಗಿದೆ:

| ಸ್ಥಳ | ಗರಿಷ್ಠ ಕೊಠಡಿ ಬಾಡಿಗೆ (ಪ್ರತಿ ದಿನಕ್ಕೆ ಊಟ ಸೇರಿದಂತೆ) |
|---|---|
| ಬಿ.ಬಿ.ಎಂ.ಪಿ ವ್ಯಾಪ್ತಿ | ರೂ.1,200/- |
| ಇತರೆ ಮುನ್ಸಿಪಾಲ್ ಕಾರ್ಪೊರೇಷನ್ ವ್ಯಾಪ್ತಿ | ರೂ.900/- |
| ಪುರಸಭೆ ವ್ಯಾಪ್ತಿಯನ್ನು ಒಳಗೊಂಡಂತೆ ರಾಜ್ಯದ ಇತರ ಎಲ್ಲಾ ಪ್ರದೇಶಗಳು | ರೂ.750/- |

**<u>ಕೆಳಕಂಡ ಷರತ್ತುಗಳನ್ವಯ ಕ್ವಾರೆಂಟೈನ್ ಕ್ಯಾಂಪ್ಸ್ ಗಳನ್ನು ತೆರೆಯುವುದು.</u>**

1. ಹೋಟೆಲ್‌ಗಳ ಸೂಕ್ತತೆಯನ್ನು ಆರೋಗ್ಯ ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ ಪರಿಶೀಲಿಸಿ ದೃಢೀಕರಿಸುವುದು.
2. ಹೋಟೆಲ್ ಮತ್ತು ಅವರ ಉದ್ಯೋಗಿಗಳನ್ನು ಸುರಕ್ಷಿತವಾಗಿರಿಸಲು ಮುಖಗವಸು (Mask) ಮತ್ತು ನೈರ್ಮಲ್ಯೀಕರಣದ ಸೇವೆಗಳನ್ನು ಒಳಗೊಂಡಂತೆ ರಕ್ಷಣಾತ್ಮಕ ಸಾಧನಗಳನ್ನು ಒದಗಿಸುವುದು.
3. ಮೇಲೆ ನಿಗದಿಪಡಿಸಿರುವ ದರಗಳಲ್ಲಿ (ವಾಸ್ತವಿಕ ದರ ಅಥವಾ ಮೇಲೆ ತಿಳಿಸಿದ ದರ ಅಥವಾ ಯಾವುದು ಕಡಿಮೆಯೋ ಅದು) ಹೋಟೆಲ್ ಸೇವೆ ಪಡೆಯತಕ್ಕದ್ದು.
4. ಒಂದು ವೇಳೆ ಸೋಂಕಿತರು ಹೆಚ್ಚಾದಲ್ಲಿ, ಸರ್ಕಾರಿ ಕಟ್ಟಡಗಳಲ್ಲಿ ಜಾಗ/ವ್ಯವಸ್ಥೆ ಲಭ್ಯವಿಲ್ಲದಿರುವುದನ್ನು ಕಡ್ಡಾಯವಾಗಿ ಖಚಿತಪಡಿಸಿಕೊಂಡ ನಂತರವೇ ಸಾಮೂಹಿಕ Quarantineಗಳಿಗೆ ಸೇವೆಯನ್ನು ಪಡೆಯತಕ್ಕದ್ದು.
5. Hotel Quarantineಗಳಲ್ಲಿರುವ ಸೋಂಕಿತರ ಚಿಕಿತ್ಸೆಗೆ ತಗಲುವ ವೆಚ್ಚವನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯMತೆ SDRF ಅಡಿ ಜಿಲ್ಲಾಧಿಕಾರಿಯವರ ಪಿ.ಡಿ ಖಾತೆಯಲ್ಲಿ ಲಭ್ಯವಿರುವ ಅನುದಾನದಿಂದ ಭರಿಸುವುದು ಹಾಗೂ ಇದಕ್ಕೆ ತಗಲುವ ವೆಚ್ಚದ ವಿವರವನ್ನು ಸರ್ಕಾರಕ್ಕೆ ಸಲ್ಲಿಸಿ, ಘಟನ್ನೋತ್ತರ ಮಂಜೂರಾತಿ ಪಡೆಯತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ.ಆಇ 239 ವೆಚ್ಚ-7/2020 ದಿನಾಂಕ:05.05.2020ರಂದು ನೀಡಿರುವ ಸಹಮತದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

6/5/2020

**(ಕೆ.ಉಮಾಪತಿ)**
ಸರ್ಕಾರದ ಜಂಟಿ ಕಾರ್ಯದರ್ಶಿ
ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ ಮತ್ತು
ನೋಂದಣಿ ಮತ್ತು ಮುದ್ರಾಂಕ)

6/5/2020

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
3. ಆಯುಕ್ತರು, ಬಿಬಿಎಂಪಿ, ಬೆಂಗಳೂರು.
4. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5. ವ್ಯವಸ್ಥಾಪಕ ನಿರ್ದೇಶಕರು, ಕೆಎಸ್‌ಟಿಡಿಸಿ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಜೆ.ಎಲ್.ಆರ್. ಬೆಂಗಳೂರು.

**ಪ್ರತಿ:**

1. ಆಯುಕ್ತರು, ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಕಂದಾಯ ಇಲಾಖೆ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿ.ನಿ)ಯವರ ಆಪ್ತ ಕಾರ್ಯದರ್ಶಿ.
4. ಸರ್ಕಾರದ ಜಂಟಿ ಕಾರ್ಯದರ್ಶಿ, ಕಂದಾಯ ಇಲಾಖೆ (ವಿ.ನಿ)ಇವರ ಆಪ್ತ ಸಹಾಯಕರು.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.